ಆ) ವಿವಿಧ ಭಾಷೆಯ ಕಲೆ ಸಂಸ್ಕೃತಿ ಮತ್ತು ಇತಿಹಾಸದ ಬಗ್ಗೆ ಎಷ್ಟು ಜನ ಅರಿವು ಉಳ್ಳ ಮಾರ್ಗದರ್ಶಕರನ್ನು ನೇಮಕ ಮಾಡಲಾಗಿದೆ,

ಇ) ಸ್ಥಳೀಯ ಯುವಕರಿಗೆ ಉದ್ಯೋಗವಕಾಶ ಕಲ್ಪಿಸಲು ಆಯವ್ಯಯದಲ್ಲಿ ತಿಳಿಸಿರುವಂತೆ 40 ಕೋಟಿ ರೂ ಗಳನ್ನು ಬಿಡುಗಡೆ ಮಾಡಲಾಗಿದೆಯೇ (ಮೂರ್ಣ ಮಾಹಿತಿ ನೀಡುವುದು) ?

ಶ್ರೀ ಬಿ ಶ್ರೀರಾಮುಲು (ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು) –

ಅ) ಪ್ರಸ್ತುತ ಸಾಲಿನಲ್ಲಿ ಬೆಂಗಳೂರಿನಲ್ಲಿ ಮಾರ್ಗದರ್ಶನ ತರಬೇತಿ ಶಿಬಿರ ಏರ್ಪಡಿಸಲು ಕ್ರಮ ಕೈಗೊಳ್ಳಲಾಗಿದೆ ಇದಕ್ಕಾಗಿ ರೂ 65,000–00 ವೆಚ್ಚವಾಗಲಿದೆ

ಆ) ಪ್ರವಾಸೋದ್ಯಮ ಇಲಾಖೆಯಿಂದ ಮಾರ್ಗದರ್ಶಕರನ್ನು ನೇಮಕ ಮಾಡಲಾಗುತ್ತಿಲ್ಲ ಆದರೆ ತರಬೇತಿ ಹೊಂದಿದ 710 ಮಾರ್ಗದರ್ಶಿಗಳು ವಿವಿಧ ಪ್ರವಾಸೋದ್ಯಮ ಸ್ಥಳಗಳಲ್ಲಿ ಮಾರ್ಗದರ್ಶನ ಸೇವೆ ನಲ್ಲಿಸುತ್ತಿದ್ದಾರೆ

ಇ) ಉದ್ಯೋಗಾವಕಾಶ ಕಲ್ಪಿಸಲು ಆಯವ್ಯಯದಲ್ಲಿ ಅನುದಾನ ಒದಗಿಸಿರುವುದಿಲ್ಲ ಆದ್ದರಿಂದ ಬಿಡುಗಡೆ ಮಾಡುವ ಪ್ರಶ್ನೆ ಉದ್ಭವಿಸುವುದಿಲ್ಲ

828 (1015) ಶ್ರೀ ಅಂಜನಾಮೂರ್ತಿ (ನೆಲಮಂಗಲ) ಮಾನ್ಯ ಮುಖ್ಯಮಂತ್ರಿಯವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ನೆಲಮಂಗಲ ಪಟ್ಟಣದಲ್ಲಿ ಸುಮಾರು 35000 ಸಂಖ್ಯೆಗಿಂತ ಮೇಲ್ಪಟ್ಟಿರುವುದರಿಂದ ಕುಡಿಯುವ ನೀರಿನ ಅಭಾವವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಈ ಪಟ್ಟಣದಲ್ಲಿ ಒಳಚರಂಡಿ ವ್ಯವಸ್ಥೆ ಇಲ್ಲದೆಯೇ ನಾಗರೀಕರು ಬಹಳಷ್ಟು ಕಷ್ಟ ಅನುಭವಿಸುತ್ತಿರುವುದು ನಿಜವಲ್ಲವೇ ,

ಇ) ಹಾಗಿದ್ದಲ್ಲಿ, ಒಳಚರಂಡಿ ಮಂಡಳಿಯು ಸುಮಾರು 95 ಕೋಟಿ ಅಂದಾಜು ಪಟ್ಟಿಯನ್ನು ತಯಾರಿಸಿ ಸರ್ಕಾರಕ್ಕೆ ಕಳುಹಿಸಿದ್ದು, ಈಗ ಯಾವ ಹಂತದಲ್ಲಿದೆ ?

ಈ) ಈ ಪಟ್ಟಣದಲ್ಲಿರುವ ನೀರಿನ ಅಭಾವವನ್ನು ತಪ್ಪಿಸಲು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಕೈಗೊಳ್ಳಲು ಸರ್ಕಾರ ಯಾವ ಯಾವ ಕ್ರಮ ಕೈಗೊಳ್ಳಲಿದೆ ?

ಶ್ರೀ ಹೆಚ್ ಡಿ ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಯವರು) –

ಅ) ಬಂದಿದೆ

ಆ) ಹೌದು

ಇ) ಸದರಿ ಯೋಜನೆಯು ಸರ್ಕಾರದಿಂದ ಅನುಮೋದಿತ 2006–07ನೇ ಸ್ಥಾಲಿ ಕ್ರಿಯಾ ಯೋಜನೆಯಲ್ಲಿ ಸೇರಿರುವುದಿಲ್ಲವಾದ್ದರಿಂದ ಪ್ರಸಕ್ತ ಸಾಲಿನಲ್ಲಿ ಯೋಜನೆಯನ್ನು ಪರಗಣಿಸಲು ಸಾಧ್ಯವಿಲ್ಲವೆಂದು ತಿಳಿಸಲಾಗಿದೆ

ಈ) ಸದರಿ ಪಟ್ಟಣಕ್ಕೆ ವಿವಿಧ ನೀರಿನ ಮೂಲಗಳಿಂದ ಶಾಶ್ವತ ನೀರು ಸರಬರಾಜು ಯೋಜನೆ ಮಾಡಲು ಸರ್ವೆ ಕೆಲಸ ನಡೆಯುತ್ತಿದ್ದು ಯೋಜನೆಯನ್ನು ತಯಾರಿಸಲಾಗುತ್ತಿದೆ

ಒಳಚರಂಡಿ ಯೋಜನೆಯನ್ನು ಕೈಗೊಳ್ಳಬೇಕಾದರೆ ಕನಿಷ್ಠ ನೀರು ಸರಬರಾಜು ಅಂದರೆ ತಲಾ ದಿನಂ ಪ್ರತಿ 100 ಲೀಟರ್ ಇರಬೇಕಾಗಿದ್ದು, ಆ ರೀತಿ ನೀರು ಸರಬರಾಜು ವ್ಯವಸ್ಥೆ ಆದ ನಂತರ ಒಳಚರಂಡಿ ಯೋಜನೆಯನ್ನು ಕೈಗೊಳ್ಳಲಾಗುವುದು

829 (1016) ಶ್ರೀ ಅಂಜನಾಮೂರ್ತಿ (ನೆಲಮಂಗಲ) ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) 2006–07ನೇ ಸಾಲಿನ ಆಯವ್ಯಯದಲ್ಲಿ ತಿಳಿಸಿರುವಂತೆ ಉಡುಪಿ ಮತ್ತು ಮಡಿಕೇರಿಗಳಲ್ಲಿ ಸುವರ್ಣ ಸಾಂಸ್ಕೃತಿಕ ಸಮುಚ್ಚಯಗಳ ನಿರ್ಮಾಣ ಆಗಿದೆಯೇ,

ಆ) ಇದಕ್ಕಾಗಿ ಬಿಡುಗಡೆಯಾದ ಹಣವೆಷ್ಟು ?

ಶ್ರೀ ಹೆಚ್ ಎಸ್ ಮಹದೇವಪ್ರಸಾದ್ (ಕನ್ನಡ ಮತ್ತು ಸಂಸ್ಕೃತಿ ಸಚಿವರು) –

ಅ) ಉಡುಪಿ ಮತ್ತು ಮಡಿಕೇರಿಗಳಲ್ಲಿ ಸುವರ್ಣ ಕರ್ನಾಟಕ ವರ್ಷಾಚರಣೆ ಅಂಗವಾಗಿ ಸುವರ್ಣ ಸಾಂಸ್ಕೃತಿಕ ಸಮುಚ್ಚಯ ನಿರ್ಮಾಣ ಮಾಡಲು ಅವಶ್ಯ ಕ್ರಮ ಕೈಗೊಳ್ಳಲಾಗಿದೆ

ಉಡುಪಿಯಲ್ಲಿ ಸದರಿ ಸಾಂಸ್ಕೃತಿಕ ಸಮುಚ್ಚಯ ಕಟ್ಟಡ ಕಾಮಗಾರಿಯನ್ನು ನಿರ್ಮಿಸಿ ಕೇಂದ್ರದವರು ನಿರ್ವಹಿಸುತ್ತಿದ್ದು ಶೇ 40 ರಷ್ಟು ಕಟ್ಟಡದ ಕಾಮಗಾರಿ ಪೂರ್ಣವಾಗಿದ್ದು ಉಳಿದ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ